ಒಪ್ಪಂದವಾಗಬೇಕಾಗುತ್ತದೆ ಮತ್ತು ತುಂಗಭದ್ರಾ ಮಂಡಳಿಯ ಅನುಮೋದನೆಬೇಕಾಗುತ್ತದೆ.

ಇ) ಮತ್ತು ಈ) ತುಂಗಭದ್ರಾ ಜಲಾಶಯವನ್ನು ಮೂಲ ಸಾಮರ್ಥ್ಯಕ್ಕೆ ಮರುಸ್ಥಾಪಿಸಲು ಪರ್ಯಾಯಗಳ ಬಗ್ಗೆ ಅಧ್ಯಯನ ನಡೆಸಿ, ಯೋಜನಾ ವರದಿಯನ್ನು ಸಿದ್ಧಪಡಿಸಲು Global Expression of Interest ನ್ನು ಕರೆಯಲಾಗಿದೆ. ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿದೆ. ವಿವರವಾದ ಯೋಜನಾ ವರದಿ ಪಡೆದು ಪರಿಶೀಲಿಸಿ ಮುಂದಿನ ಅಗತ್ಯ ಕ್ರಮ ತೆಗೆದುಕೊಳ್ಳಲಾಗುವುದು.

ಪೋಡಿಮುಕ್ತ ಗ್ರಾಮಗಳನ್ನಾಗಿ ಮಾಡುವುದು

925(1952); ಶ್ರೀ ಬಾಲಕೃಷ್ಣ ಹೆಚ್.ಸಿ. (ಮಾಗಡಿ)

ಅ) ಪೋಡಿ ಮುಕ್ತ ಗ್ರಾಮಗಳನ್ನು ಮಾಡುವ ಯೋಜನೆಯನ್ನು ಯಾವ ದಿನಾಂಕದಿಂದ ಜಾರಿಗೆ ತರಲಾಗಿದೆ.

ಆ) ಮಾಗಡಿ ತಾಲ್ಲೂಕಿನಲ್ಲಿ ಯಾವ್ಯಾವ ಗ್ರಾಮಗಳನ್ನು ಪೋಡಿ ಮುಕ್ತ ಗ್ರಾಮಗಳನ್ನಾಗಿ ಮಾಡಬೇಕಾಗಿರುತ್ತದೆ. (ಗ್ರಾಮಗಳ ವಿವರ ನೀಡುವುದು)

ಇ) ಹಾಗಿದ್ದಲ್ಲಿ, ಈಗಾಗಲೇ ಎಷ್ಟು ಮತ್ತು ಯಾವ್ಯಾವ ಗ್ರಾಮಗಳನ್ನು ಪೋಡಿ ಮುಕ್ತ ಗ್ರಾಮಗಳನ್ನಾಗಿ ಮಾಡಲಾಗಿದೆ.

ಈ) ಈಗ ಪೋಡಿ ಮುಕ್ತ ಗ್ರಾಮಕ್ಕೆ ಆಯ್ಕೆ ಮಾಡಿರುವ ಗ್ರಾಮಗಳಾವುವು;

ಉ) ಯಾವ ಕಾಲಮಿತಿಯಲ್ಲಿ ಈ ತಾಲ್ಲೂಕಿನ ಎಲ್ಲಾ ಗ್ರಾಮಗಳನ್ನು ಪೋಡಿ ಮುಕ್ತಗೊಳಿಸಲಾಗುವುದು?

ಶ್ರೀ ವಿ. ಶ್ರೀನಿವಾಸ ಪ್ರಸಾದ್ (ಕಂದಾ ಯ ಸಚಿವರು)

ಅ), ಆ), ಇ), ಈ) ಮತ್ತು ಉ) ಈ ಹಿಂದೆ ಪೋಡಿ ಆಂದೋಲನದಲ್ಲಿ ಆಯ್ದ ಕೆಲವು ತಾಲ್ಲೂಕಿನ ಗ್ರಾಮಗಳ ಪೋಡಿ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿತ್ತು. ಆದರೆ ಇದೀಗ ನಿರ್ದಿಷ್ಟವಾಗಿ ಪೋಡಿ ಮುಕ್ತ ಗ್ರಾಮ ಯೋಜನೆಯ ಗ್ರಾಮಗಳ ಪೋಡಿ ಪ್ರಕರಣಗಳನ್ನು ವಿಲೇವಾರಿ ಮಾಡುವ ಸಲುವಾಗಿ 2015–16 ನೇ ಆಯವ್ಯಯದಲ್ಲಿ ಪೋಡಿ ಕಡತ ಮುಕ್ತ ಗ್ರಾಮ ಎಂಬ ಹೊಸ ಯೋಜನೆಯನ್ನು ಜಾರಿಗೆ ತರಲು ಉದ್ದೇಶಿಸಲಾಗಿದೆ.

ಸದರಿ ಯೋಜನೆಯನ್ನು ಜಾರಿಗೆ ತರುವ ಬಗ್ಗೆ ರೂಪುರೇಷೆಗಳನ್ನು ಸಿದ್ಧಪಡಿಸಿ ಮತ್ತು ಸಂಬಂಧಪಟ್ಟ ಇಲಾಖೆಗಳೊಂದಿಗೆ ಸಮಾಲೋಚಿಸಿ ಯೋಜನೆಯನ್ನು ಜಾರಿಗೆ ತರುವ ಬಗ್ಗೆ ಪರಿಶೀಲನೆ ಮಾಡಲಾಗುತ್ತಿದೆ. ಈ ಪ್ರಕ್ರಿಯೆ ಅಂತಿಮವಾದ ತರುವಾಯ ಮಾಗಡಿ ತಾಲ್ಲೂಕಿನಲ್ಲಿ ಯಾವ ಯಾವ ಗ್ರಾಮಗಳನ್ನು ಪೋಡಿ ಮುಕ್ತಗೊಳಿಸಲು ಗ್ರಾಮಗಳನ್ನು ಆಯ್ಕೆ ಮಾಡಬೇಕು ಮತ್ತು ತಾಲ್ಲೂಕಿನಲ್ಲಿನ ಎಲ್ಲಾ ಗ್ರಾಮಗಳನ್ನು ಯಾವ ಕಾಲಮಿತಿಯಲ್ಲಿ ಪೋಡಿ ಮುಕ್ತಗೊಳಿಸಬೇಕು ಎಂಬುದರ ಬಗ್ಗೆ ಪರಿಶೀಲಿಸಲಾಗುವುದು.

ಅನುದಾನ ಬಿಡುಗಡೆ

926(801); ಶ್ರೀ ಬಣಕಾರ್ ಯು.ಬಿ (ಹಿರೇಕೆರೂರು)

ಅ) 2012–13 ರಿಂದ 2014–15 ನೇ ಸಾಲಿನ ವರೆಗೆ ಇಲಾಖೆಗೆ ನಿಗಧಿಪಡಿಸಿದ ಆರ್ಥಿಕ ಮತ್ತು ಭೌತಿಕ ಗುರಿ ಎಷ್ಟು;

ಆ) ಪ್ರತಿ ವರ್ಷ ಬಿಡುಗಡೆಯಾದ ಅನುದಾನದ ಮೊತ್ತ ಎಷ್ಟು ಹಾಗೂ ಖರ್ಚು ಮಾಡಿದ ಮೊತ್ತ ಎಷ್ಟು;

ಇ) ಪ್ರತಿ ವರ್ಷ ಸಾಧಿಸಿದ ಭೌತಿಕ ಪ್ರಗತಿ ಎಷ್ಟು?